ಇ) ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಬಿಪಿಎಲ್ ಪಡಿತರ ಚೀಟಿ ಪಡೆಯಲು ಅನರ್ಹರಿದ್ದು, ಸರ್ಕಾರಕ್ಕೆ ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಪಡಿತರ ಚೀಟಿ ಪಡೆದಿರುವ ಪಡಿತರ ಚೀಟಿದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಿ, ಸದರಿ ಅನರ್ಹ ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ.

ಪಡಿತರ ಚೀಟಿಗಾಗಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವುದು

2715 (3663); ಶ್ರೀ ಮಧು ಬಂಗಾರಪ್ಪ. ಎಸ್ (ಸೊರಬ)

ಅ) ರಾಜ್ಯಾದ್ಯಂತ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯಿಂದ ಹೊಸದಾಗಿ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಲು ಅವಕಾಶವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಹೊಸ ಪಡಿತರ ಚೀಟಿ ಪಡೆಯಲು ಅವಕಾಶ ಕಲ್ಪಿಸಿಕೊಡಲಾಗುವುದು (ಸಂಪೂರ್ಣ ಮಾಹಿತಿ ನೀಡುವುದು)

ಇ) ಹಾಗಿದ್ದಲ್ಲಿ, ಇಂಟರ್‌ನೆಟ್ ಮೂಲಕ ಹೊಸ ಪಡಿತರ ಚೀಟಿಯನ್ನು ಪಡೆಯುವಲ್ಲಿ ಜನಸಾಮಾನ್ಯರಿಗೆ ಉಂಟಾಗುತ್ತಿರುವ ಗೊಂದಲಗಳನ್ನು ನಿವಾರಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು(ವಿವರವಾದ ಮಾಹಿತಿ ನೀಡುವುದು)

ಶ್ರೀ ದಿನೇಶ ಗುಂಡೂರಾವ್ (ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ದಿನಾಂಕ: 01.05.2015 ರಿಂದ ಹೊಸ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು.

ಇ) ಸಾರ್ವಜನಿಕರು ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿ ಮತ್ತು ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಮತ್ತು ನಗರ/ಪಟ್ಟಣ ಪ್ರದೇಶಗಳಲ್ಲಿ ಕರ್ನಾಟಕ ಒನ್/ಬೆಂಗಳೂರು ಒನ್ ಹಾಗೂ ಖಾಸಗಿ ಸೇವಾ ಪೋಟೋ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಪಡಿತರ ಚೀಟಿ ಅರ್ಜಿ ಸಲ್ಲಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಈ ರೀತಿ ಸಲ್ಲಿಸಲಾದ ಅರ್ಜಿಗಳನ್ನು ಆಹಾರ ನಿರೀಕ್ಷಕರು ಸೂಕ್ತ ಪರಿಶೀಲನೆಯ ತರುವಾಯ ಆನ್‌ಲೈನ್‌ನಲ್ಲಿಯೇ ಅನುಮೋದಿಸಿ ಪಡಿತರ ಚೀಟಿಗಳನ್ನು ಮುದ್ರಿಸುವ ವ್ಯವಸ್ಥೆ ಕಲ್ಪಿಸಲಾಗಿದೆ. ಪಡಿತರ ಚೀಟಿ ಸಿದ್ಧಗೊಂಡ ತಕ್ಷಣ ಪಡಿತರ ಚೀಟಿಯ ಅರ್ಜಿದಾರರಿಗೆ ಎಸ್.ಎಂ.ಎಸ್. ಮೂಲಕ ಮಾಹಿತಿ ರವಾನಿಸುವ ವ್ಯವಸ್ಥೆಯನ್ನು ಮಾಡಲಾಗಿದೆ. ಅಲ್ಲದೆ, ಪಡಿತರ ಚೀಟಿ ವಿತರಣೆಯನ್ನು ಸುಗಮಗೊಳಿಸುವ ಸಲುವಾಗಿ ಆಹಾರ ಕಚೇರಿಯೂ ಸೇರಿದಂತೆ ಗ್ರಾಮ ಪಂಚಾಯಿತಿ/ ಕರ್ನಾಟಕ ಒನ್/ ಬೆಂಗಳೂರು ಒನ್ ಹಾಗೂ ಅಟಲ್ ಜೀ ಜನ ಸ್ನೇಹಿ ಕೇಂದ್ರಗಳ ಮೂಲಕವೂ ಪಡಿತರ ಚೀಟಿ ವಿತರಣಾ ಕಾರ್ಯ ನಿರ್ವಹಿಸುವ ವ್ಯವಸ್ಥೆ ಕಲ್ಪಿಸಲಾಗಿದೆ.

ಆಸ್ಪತ್ರೆಗಳಲ್ಲಿ ಸ್ಟಾಫ್ ನರ್ಸ್‌ಗಳ ಕೊರತೆ

2716 (3664); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯಾದ್ಯಂತ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸ್ಟಾಫ್ ನರ್ಸ್ ಹುದ್ದೆಗಳು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸ್ಟಾಫ್ ನರ್ಸ್ ಹುದ್ದೆಗಳನ್ನು ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಗಮನದಲ್ಲಿದೆಯೇ (ಸಂಪೂರ್ಣ ವಿವರಣೆ ನೀಡುವುದು);